# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಾರನೆಯ ಅಧಿವೇಶನ

## ಪೂರಕ ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ:22ನೇ ಫೆಬ್ರವರಿ, 2022**

* * *

**ಕ್ರಮ ಸಂಖ್ಯೆ:02ರ ನಂತರ ಈ ಕೆಳಕಂಡ ಬಾಬ್ತನ್ನು ಸೇರಿಸಿಕೊಳ್ಳತಕ್ಕದ್ದು**

### 02 ಎ. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.**

01. ಕರ್ನಾಟಕ ವಿಧಾನಮಂಡಲದವರ ಸಂಬಳಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2022

02. ಕರ್ನಾಟಕ ಮಂತ್ರಿಗಳ ಸಂಬಳಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2022

### 03 ಎ. ಶಾಸನ ರಚನೆ

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

ಅ. ಕರ್ನಾಟಕ ವಿಧಾನಮಂಡಲದವರ ಸಂಬಳಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2022

**ಶ್ರೀ ಜೆ.ಸಿ. ಮಾಧುಸ್ವಾಮಿ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ವಿಧಾನಮಂಡಲದವರ ಸಂಬಳಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಆ. ಕರ್ನಾಟಕ ಮಂತ್ರಿಗಳ ಸಂಬಳಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2022

**ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ಮಂತ್ರಿಗಳ ಸಂಬಳಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

..2..

## 04 ಎ. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

"2022ನೇ ಫೆಬ್ರವರಿ, 14ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:15.02.2022ರಂದು **ಶ್ರೀ ಅರುಣ ಶಹಾಪುರ** ರವರು ಸೂಚಿಸಿದ ಪ್ರಸ್ತಾವದ ಮೇಲೆ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**